SCCH – 01
MVC No.3476/2024
PW3

<u>ಸಾಕ್ಷಿಗೆ ದಿನಾಂಕಃ **28.06.2025** ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತುಃ</u>

<u>ಮುಖ್ಯ ವಿಚಾರಣೆ: ಅರ್ಜಿದಾರರ ಪರ ವಕೀಲರಾದ ಶ್ರೀಮತಿ.ಶಿಲ್ಪ ರವರಿಂದಃ</u>

1) ನಾನು ಈ ಪ್ರಕರಣದಲ್ಲಿ ಸಾಕ್ಷಿದಾರನಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆ ಸಾಕ್ಷ್ಯಕ್ಕೆ ಬದಲಾಗಿ ನಾನು ಈ ದಿನ ನನ್ನ ಸಾಕ್ಷಿ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ. ಸದರಿ ಪ್ರಮಾಣ ಪತ್ರದಲ್ಲಿ ಬರೆದಿರುವ ಅಂಶಗಳು ಸತ್ಯವಾಗಿರುತ್ತವೆ ಮತ್ತು ಅದನ್ನು ನಾನು ಓದಿ ತಿಳಿದುಕೊಂಡು ನನ್ನ ಸಹಿಯನ್ನು ಮಾಡಿರುತ್ತೇನೆ. ಸದರಿ ಪ್ರಮಾಣ ಪತ್ರವನ್ನು ನನ್ನ ಹೇಳಿಕೆಗೆ ಅನುಸಾರವಾಗಿ ನಮ್ಮ ವಕೀಲರು ಸಿದ್ಧಪಡಿಸಿದ್ದಾರೆ.

2) ಈಗ ಸಾಕ್ಷಿದಾರರು ತಮ್ಮ ಮೂಲ ಆಧಾರ್ ಕಾರ್ಡ್ ದಾಖಲೆ ಮತ್ತು ಇದೇ ದಾಖಲೆಯ ಫೋಟೋ ಪ್ರತಿಯನ್ನು ಹಾಜರುಪಡಿಸಿದ್ದಾರೆ. ಸದರಿ ಮೂಲ ಪ್ರತಿಯನ್ನು ಮತ್ತು ಫೋಟೋ ಪ್ರತಿಯನ್ನು ಹೋಲಿಕೆ ಮಾಡಿ ನೋಡಲಾಗಿ ಈ ಮೂಲ ದಾಖಲೆಯನ್ನು ಆಧಾರವಾಗಿ ಇಟ್ಟು ಕೊಂಡು ಯಾಂತ್ರಿಕ ಸಹಾಯದಿಂದ ಈ ಫೋಟೋ ಪ್ರತಿಯನ್ನು ಸಿದ್ಧಪಡಿಸಿದ್ದಾರೆ ಎಂದು ಕಂಡು ಬರುತ್ತದೆ. ಆದ ಕಾರಣದಿಂದ ಸದರಿ ಫೋಟೋ ಪ್ರತಿಯನ್ನು ನಿ.ಪಿ.**17** ಎಂದು ಗುರುತಿಸಿದೆ ಮತ್ತು ಮೂಲ ದಾಖಲೆಯನ್ನು ಈ ಸಾಕ್ಷಿದಾರರಿಗೆ ವಾಪಸ್ಸು ನೀಡಿದೆ.

**<u>ಪಾಟೀ ಸವಾಲು: 1 ನೇ ಎದುರುದಾರರ ಪರವಾಗಿ ಶ್ರೀ.ಜೆ.ಎಸ್ ವಕೀಲರಿಂದಃ</u>**

1) ನನಗೆ ಅರ್ಜಿದಾರರು ಮೊದಲಿನಿಂದಲೂ ಪರಿಚಯ ಇದ್ದಾರೆ ಎಂದರೆ ಕೇವಲ ಮುಖ ಪರಿಚಯ ಇದೆ. ಅಪಘಾತಕ್ಕೆ ಸಂಬಂಧಿಸಿದ ಹಾಗೆ ಅರ್ಜಿದಾರರ ಹೆಂಡತಿಯು ಪೋಲಿಸರಿಗೆ ದೂರು ಕೊಟ್ಟಿದ್ದಾರೆ. ನಾನು ಮತ್ತು ಪುಟ್ಟರಾಜು ಮತ್ತು ಯೋಗೇಶ ರವರು ಜೊತೆಯಾಗಿ ದ್ವಿಚಕ್ರ ವಾಹನದಲ್ಲಿ ಪ್ರಯಾಣಿಸುತ್ತಿದ್ದಾಗ ಅಪಘಾತವು ಆಗಿದೆ. ನಾವು 3 ಜನರು ಹೆಲ್ಮೆಟ್ ಧರಿಸಿರಲಿಲ್ಲ ಎಂದರೆ ಸುಳ್ಳು. ನನಗೆ ಮತ್ತು ಪುಟ್ಟ ರಾಜು ರವರಿಗೆ ಈ ಅಪಘಾತದಿಂದ ಸಣ್ಣ ಪುಟ್ಟ ಗಾಯಗಳು ಮಾತ್ರ ಆಗಿವೆ. ನಾನಾಗಲೀ ಅಥವಾ ಪುಟ್ಟರಾಜು ಆಗಲೀ ಯಾವುದೇ ಚಿಕಿತ್ಸೆಯನ್ನು ಪಡೆದುಕೊಂಡಿರುವುದಿಲ್ಲ.

2) ನಾನು ಹೇಳಿದ ಹಾಗೆ ಯಾವುದೇ ಘಟನೆಯು ಆಗಿರಲಿಲ್ಲ ಮತ್ತು ನಾನು ಸ್ಥಳದಲ್ಲಿಯೇ ಇರಲಿಲ್ಲ ಹಾಗೂ ಅರ್ಜಿದಾರರು ಕೆಂಪೇಗೌಡ ವೃತ್ತದ ಬಳಿ ನಿಂತುಕೊಂಡಿದ್ದ ಸಮಯದಲ್ಲಿ ಯಾವುದೋ ಅಪರಿಚಿತ ವಾಹನವು ಅರ್ಜಿದಾರರಿಗೆ ಡಿಕ್ಕಿ ಹೊಡೆದಿದೆ ಮತ್ತು 2 ನೇ ಎದುರುದಾರರ ವಾಹನವನ್ನು ಈ ಪ್ರಕರಣದಲ್ಲಿ ಸುಳ್ಳಾಗಿ ಸೇರಿಸಲಾಗಿದೆ ಮತ್ತು ಆ ಕಾರಣದಿಂದಲೇ ಪೋಲಿಸರಿಗೆ ದೂರನ್ನು 7 ದಿನ ತಡವಾಗಿ ಕೊಡಲಾಗಿದೆ ಎಂದರೆ ಸುಳ್ಳು.

3) ಅಪಘಾತದ ಸಂಬಂಧವಾಗಿ ಪೋಲಿಸರಿಗೆ ದೂರನ್ನು ಕೊಡಲು ನನಗೆ ತೊಂದರೆ ಇತ್ತೋ ಹೇಗೆ ಎಂದರೆ ಆತನು ನನಗೆ ಸಂಬಂಧಿ ಆಗಿರದ ಕಾರಣದಿಂದ

ನಾನು ಪೋಲಿಸರಿಗೆ ದೂರನ್ನು ಕೊಟ್ಟಿಲ್ಲ. ಅಪಘಾತದ ನಂತರ ಅರ್ಜಿದಾರರನ್ನು ಮಾಗಡಿಯಲ್ಲಿಯೇ ಇರುವಂತಹ ದಿವ್ಯಂ ಆಸ್ಪತ್ರೆಗೆ ನಾನೇ ಕರೆದುಕೊಂಡು ಹೋಗಿ ಸೇರಿಸಿದ್ದೇನೆ. ನಾನು ಹೇಳಿದ ಹಾಗೆ ಆ ದಿನ ನಾನು ಸ್ಥಳದಲ್ಲಿ ಇರಲಿಲ್ಲ ಮತ್ತು ಯಾವುದೇ ಅಪಘಾತವನ್ನು ನಾನು ನೋಡಿರುವುದಿಲ್ಲ ಮತ್ತು ಅರ್ಜಿದಾರರನ್ನು ನಾನು ಯಾವುದೇ ಆಸ್ಪತ್ರೆಗೆ ಕರೆದುಕೊಂಡು ಹೋಗಿರುವುದಿಲ್ಲ ಎಂದರೆ ಸುಳ್ಳು.

4) ಅಪಘಾತದ ಸಂಬಂಧವಾಗಿ ಮಹಜರ್ ಮಾಡುವ ಕಾಲದಲ್ಲಿ ನನ್ನನ್ನು ಪೋಲಿಸರು ಕರೆದಿದ್ದರು, ಆದರೆ ನನ್ನ ಸಹಿಯನ್ನು ಪೋಲಿಸರು ಪಡೆದುಕೊಂಡಿರುವುದಿಲ್ಲ.

5) ಈ ಅಪಘಾತಕ್ಕೆ ಸಂಬಂಧಪಟ್ಟ ಹಾಗೆ ನಾನು ಬೇರೆ ಯಾವುದೇ ನ್ಯಾಯಾಲಯದಲ್ಲಿ ಸಾಕ್ಷ್ಯವನ್ನು ನುಡಿದಿರುವುದಿಲ್ಲ.

6) ನಾನು ಹೇಳಿದ ಹಾಗೆ ಯಾವುದೇ ಅಪಘಾತವು ಆಗಿಲ್ಲ ಮತ್ತು ಯಾವುದೇ ಘಟನೆಯನ್ನು ನಾನು ನೋಡಿಲ್ಲ ಮತ್ತು ಕೇವಲ ಅರ್ಜಿದಾರರಿಗೆ ಸಹಾಯ ಮಾಡಬೇಕು ಎಂಬ ಉದ್ದೇಶದಿಂದ ನಾನು ಈ ನ್ಯಾಯಾಲಯದ ಮುಂದೆ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆ ಎಂದರೆ ಸುಳ್ಳು.

**<u>ಪಾಟೀ ಸವಾಲು: 2 ನೇ ಎದುರುದಾರರ ಪರ ವಕೀಲರಿಂದಃ</u>**

ಸದರಿ ಎದುರುದಾರರು ಮತ್ತು ಅವರ ಪರ ವಕೀಲರು ಹಾಜರಿಲ್ಲ. ಆದ ಕಾರಣದಿಂದ ಯಾವುದೇ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**<u>ಮರು ವಿಚಾರಣೆಃ ಇಲ್ಲ.</u>**

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ)

**(ಓ.ಹೇ.ಕೇ.ಸ.ಇ)**

**ಮುಖ್ಯ ನ್ಯಾಯಾಧೀಶರು,**
ಲಘು ವ್ಯವಹಾರಗಳ ನ್ಯಾಯಾಲಯ,
ಬೆಂಗಳೂರು.